ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMI0ACM2/96/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:12-10-2021.

**-:: ಸುತ್ತೋಲೆ ::-**

ವಿಷಯ: 2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಸೆಮಿಸ್ಟರ್ ಹಾಗೂ ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೋಮಾಗೆ ಪ್ರವೇಶ ಪಡೆದ ಅಭ್ಯರ್ಥಿಗಳ ವಿವರವನ್ನು ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಅಧಿಸೂಚನೆ ಸಂ. DTE-ADMI0ACM2/96/2021, ದಿ:11-08-2021 & ದಿ:18-08-2021 (ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ).
2. ಈ ಕಛೇರಿ ಅಧಿಸೂಚನೆ ಸಂ. DTE-ADMI0ACM2/ 106 /2021, ದಿ:31-08-2021 (ಲ್ಯಾಟರಲ್ ಎಂಟ್ರಿ ಡಿಪ್ಲೋಮಾ ಪ್ರವೇಶ ಸಂಬಂಧ).

-0000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) & (2)ರಲ್ಲಿನ ಪ್ರವೇಶಾಧಿಸೂಚನೆಗಳನ್ವಯ 2021-22 ನೇ ಶೈಕ್ಷಣಿಕ ಸಾಲಿನ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಡಿಪ್ಲೋಮಾಗೆ ಪ್ರವೇಶ ನೀಡುವಲ್ಲಿ ಚಾಲ್ತಿಯಲ್ಲಿರುವ ವಿವಿಧ ನಿಯಮಗಳು ಮತ್ತು ಸರ್ಕಾರಿ ಆದೇಶಗಳಲ್ಲಿ ಸೂಚಿಸಿರುವ ಅಂಶಗಳನ್ನು ಸ್ಪಷ್ಟವಾಗಿ ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳ ಪ್ರವೇಶ ಮಾಡಿಕೊಳ್ಳಬೇಕೆಂದು ಸಂಸ್ಥೆಗಳ ಪ್ರಾಂಶುಪಾಲರಿಗೆ ತಿಳಿಸಲಾಗಿತ್ತು. ಈ ಪ್ರಕಾರ ಈಗಾಗಲೇ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕಿಯೆಗಳು ಪ್ರಗತಿಯ ಹಂತದಲ್ಲಿದ್ದು, ಆಫ್-ಲೈನ್ ಮುಖಾಂತರ ಪ್ರಥಮ ಸೆಮಿಸ್ಟರ್, ಮರುಪ್ರವೇಶ ಹಾಗೂ ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್‌ಗೆ ಪ್ರವೇಶ ಮಾಡಿಕೊಂಡಂತಹ ಅಭ್ಯರ್ಥಿಗಳ ವಿವರವನ್ನು http://dtetech.karnataka.gov.in/dteone/emp/Login.aspx ಲಿಂಕ್‌ನಲ್ಲಿ ನಿಗಧಿಪಡಿಸಿರುವ ಪ್ರವೇಶ ಅವಧಿಯ ಅಂತಿಮ ದಿನಾಂಕದೊಳಗೆ ಅಪ್-ಲೋಡ್ ಮಾಡಲು ಸೂಚಿಸಿದೆ. ನಂತರ ಅಭ್ಯರ್ಥಿಗಳ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವುದು. ಪ್ರವೇಶಾನುಮೋದನೆಯ ದಿನಾಂಕಗಳನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು. **ಮುಂದುವರೆದು ಪ್ರಸಕ್ತ ಸಾಲಿನಲ್ಲಿ ಡಿಪ್ಲೋಮಾ ಅರ್ಜಿ ಮಾರಾಟದಿಂದ ಸಂಗ್ರಹವಾಗಿರುವ ಶುಲ್ಕವನ್ನು ಆಯುಕ್ತಾಲಯದ ಮುಂದಿನ ಸೂಚನೆ ನೀಡುವವರೆಗೂ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳು ಸದರಿ ಮೊತ್ತವನ್ನು ಪ್ರಾಂಶುಪಾಲರ ಪಿ.ಡಿ. ಖಾತೆಯಲ್ಲಿರಿಸಿಕೊಳ್ಳಲು ಸೂಚಿಸಿದೆ.**

| ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ. |
| --- |

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

*ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ.*

ಪ್ರತಿ ಮಾಹಿತಿಗಾಗಿ:-
1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ) ಇವರ ಆಪ್ತಶಾಖೆಗೆ.
4. ಕಛೇರಿ ಪ್ರತಿ.

Scanned with CamScanner